ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಮೂರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 27ನೇ ಜನವರಿ, 2014
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

2. ಚುನಾವಣಾ ಪ್ರಸ್ತಾವ

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರು) ಅವರು:-

ಕರ್ನಾಟಕ ರಾಜ್ಯ ಡಾ|| ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಪ್ರಶಾಸನ ಸಭೆಗೆ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

3. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು.

1) ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರ ಸೌಲಭ್ಯಗಳ ನಿಯಂತ್ರಣ) ವಿಧೇಯಕ, 2014
ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರ ಸೌಲಭ್ಯಗಳ ನಿಯಂತ್ರಣ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಮು.ತಿ.ನೋ.,

2) **ಹೈದರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ನಿರಸನ ವಿಧೇಯಕ, 2014**
ಶ್ರೀ ಎಸ್.ಆರ್. ಪಾಟೀಲ್ (ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು:-

ಅ) 2014ನೇ ಸಾಲಿನ ಹೈದರಾಬಾದ್- ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ನಿರಸನ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3) **ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕ, 2014**
ಶ್ರೀ ಸತೀಶ್ ಲಕ್ಷ್ಮಣರಾವ್ ಜಾರಕಿಹೊಳಿ (ಅಬಕಾರಿ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ದಿನಾಂಕ 24ನೇ ಜನವರಿ 2014ರಂದು ಶ್ರೀ ಬಸವರಾಜ ರಾಯರೆಡ್ಡಿ ಯವರು "2014ರ ಜನವರಿ 22ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ಸೂಚಿಸಿದ ಪ್ರಸ್ತಾಪದ ಮೇಲೆ ಚರ್ಚೆ.

೫. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಡಿ. ರೇವಣ್ಣ ಅವರು ಹೊಳೆನರಸೀಪುರ ತಾಲ್ಲೂಕು ಕಸಬಾ ಹೋಬಳಿ ದೊಡ್ಡಕಾಡನೂರು ವೃತ್ತದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಗ್ರಾಮಲೆಕ್ಕಾಧಿಕಾರಿ ಭೂ ದಾಖಲೆಗಳನ್ನು ತಿದ್ದಿ ಕಾನೂನು ಬಾಹಿರವಾಗಿ ಬೇನಾಮಿ ಹೆಸರಿನಲ್ಲಿ ಸುಣ್ಣಕಲ್ಲು ಗ್ರಾಮದಲ್ಲಿ ಜಮೀನುಗಳನ್ನು ಅಕ್ರಮವಾಗಿ ಖರೀದಿಸಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2. ಶ್ರೀ ಎನ್. ಚಲುವರಾಯಸ್ವಾಮಿ ಮತ್ತು ಶ್ರೀ ಹೆಚ್.ಡಿ. ರೇವಣ್ಣ ಅವರುಗಳು ಹೊಳೆನರಸೀಪುರ ತಾಲ್ಲೂಕಿನ ಪಡುವಲಹಿಪ್ಪೆ ಸಮುದಾಯ ಆಸ್ಪತ್ರೆ ಮತ್ತು ಹರದನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

3. ಶ್ರೀ ಹೆಚ್. ಆರ್. ಅಲಗೂರ (ರಾಜು) ಅವರು ಟಿಪ್ಪು ಸುಲ್ತಾನರ ಜನ್ಮ ದಿನೋತ್ಸವವನ್ನು ಸರ್ಕಾರಿ ರಜೆಯನ್ನಾಗಿ ಘೋಷಣೆ ಮಾಡಿ ಸರ್ಕಾರದ ವತಿಯಿಂದ ಆಚರಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4. ಶ್ರೀ ಈ. ತುಕಾರಾಂ ಅವರು ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 40ರಲ್ಲಿ ಬರುವ ಕೂಡ್ಲಿಗಿ-ಸಂಡೂರು-ತೋರಣಗಲ್ ನಡುವಿನ ರಸ್ತೆ ಅಭಿವೃದ್ಧಿ ಕಾಮಗಾರಿಯು ಪೂರ್ಣಗೊಳ್ಳದೆ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

6. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರ ಸೌಲಭ್ಯಗಳ ನಿಯಂತ್ರಣ) ವಿಧೇಯಕ, 2014
ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರ ಸೌಲಭ್ಯಗಳ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2) ಹೈದರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ನಿರಸನ ವಿಧೇಯಕ, 2014.
ಶ್ರೀ ಎಸ್.ಆರ್. ಪಾಟೀಲ್ (ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು:-

ಅ) 2014ನೇ ಸಾಲಿನ ಹೈದರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ನಿರಸನ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3) ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕ, 2014
ಶ್ರೀ ಸತೀಶ್ ಲಕ್ಷ್ಮಣರಾವ್ ಜಾರಕಿಹೊಳಿ (ಅಬಕಾರಿ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.,

7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಕೆ.ಎಸ್. ಪುಟ್ಟಣ್ಣಯ್ಯ, ಬಿ.ಆರ್. ಪಾಟೀಲ್ ಮತ್ತು ಅಶೋಕ ಖೇಣಿ ಅವರುಗಳು ವಂಶವಾಹಿ ತಳಿಗಳ ಬೆರಕೆಯಿಂದಾಗಿ ಆಗುತ್ತಿರುವ ಅನಾಹುತವನ್ನು ತಪ್ಪಿಸಿ ನೈಸರ್ಗಿಕ ದೇಶಿ ತಳಿಗಳನ್ನು ಉಳಿಸಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವ ವಿಷಯದ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)